**ಪ್ರಾಸಾ-1**

**ದಿನಾಂಕ 09.07.2025 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಪಾಟೀ ಸವಾಲು : ಶ್ರೀ ಎಸ್.ಜೆ.ಡಿ. ವಕೀಲರಿಂದ 2ನೇ ಎದುರುದಾರರ ಪರ:**

ನನ್ನ ಹೆಸರು ಎಂ. ನಾಗು. ನನ್ನ ಹೆಸರು ನಾಗರತ್ನ ಎಂದು ತೋರಿಸಲು ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿ. ನನ್ನ ಹೆಸರು ಎಂ. ನಾಗು ಅಲಿಯಾಸ್ ನಾಗರತ್ನ ಎಂದು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಮಾತ್ರ ನಮೂದು ಇದ್ದು, ಬೇರೆ ಯಾವುದೇ ದಾಖಲೆಯಲ್ಲಿ ನಮೂದು ಇಲ್ಲ ಎಂದರೆ ಸರಿ. ನನ್ನ ಆಧಾರ್ ಕಾರ್ಡ್‌ನಲ್ಲಿ ನನ್ನ ಹೆಸರು ಎಂ. ನಾಗು ಎಂದು ನಮೂದು ಇದೆ ಎಂದರೆ ಸರಿ. ನನ್ನ ವೈದ್ಯಕೀಯ ದಾಖಲೆಗಳಲ್ಲಿ ನನ್ನ ಹೆಸರನ್ನು ನಾಗರತ್ನ ಎಂದು ಬರೆದಿದ್ದನ್ನು ಅಳಿಸಿ ಎಂ. ನಾಗು ಎಂದು ನಮೂದಿಸಲಾಗಿದೆ ಎಂದರೆ ಸರಿ.

ಅಪಘಾತವಾದ ಮರುದಿನ ಮೈಸೂರಿನ ಕಾವೇರಿ ಆಸ್ಪತ್ರೆಗೆ ಚಿಕಿತ್ಸೆಗೆ ಬಂದಿದ್ದೆ. ಆ ಆಸ್ಪತ್ರೆಯ ದಾಖಲೆಗಳಲ್ಲಿ ನನ್ನ ಹೆಸರನ್ನು ಎಂ. ನಾಗು ಎಂದು ನಮೂದಿಸಿದ್ದು, ಅಪಘಾತದ ದಿನ ಪಡೆದುಕೊಂಡ ವೈದ್ಯಕೀಯ ದಾಖಲೆಗಳಲ್ಲಿ ನನ್ನ ಹೆಸರು ಇಲ್ಲ ಎಂದರೆ ಸರಿ. ಅಪಘಾತದ ದಿನ ನಾನು ಸ್ಥಳದಲ್ಲಿ ಇರದ ಕಾರಣ ನನ್ನ ಹೆಸರು ವೈದ್ಯಕೀಯ ದಾಖಲೆಗಳಲ್ಲಿ ಇಲ್ಲ ಎಂದರೆ ಸರಿಯಲ್ಲ. ಆನಂತರ ನಾನು ಕೂಡ ನನ್ನ ಗಂಡನ ಜೊತೆ ಅಪಘಾತದ ದಿನ ಮೋಟಾರ್ ಸೈಕಲ್‌ನಲ್ಲಿ ಹೋಗುತ್ತಿದ್ದೆ ಎಂದು

ತೋರಿಸಲು ಸದರಿ ಆಸ್ಪತ್ರೆಯಲ್ಲಿ ಸುಳ್ಳು ದಾಖಲೆಯನ್ನು ಪಡೆದುಕೊಂಡಿದ್ದೇನೆ ಎಂದರೆ ಸರಿಯಲ್ಲ.

ನಾನು ಅಪಘಾತವಾದ ನಂತರ ರಾಮನಗರದ ಜಿಲ್ಲಾಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಪಡೆದ ಬಗ್ಗೆ ದಾಖಲೆಯನ್ನು ಹಾಜರುಪಡಿಸಿಲ್ಲ. ಹಾಗಾಗಿ, ನಾನು ಅಪಘಾತದ ಸ್ಥಳದಲ್ಲಿ ಬಿದ್ದು ನನಗೆ ಪೆಟ್ಟಾಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ನನಗೆ ಯಾವುದೇ ಮೂಳೆ ಮುರಿತವಾಗಿರಲಿಲ್ಲ ಎಂದರೆ ಸರಿ. ನನಗೆ ಕೇವಲ ತರಚಿದ ಗಾಯವಾಗಿದ್ದು, ಪರಿಹಾರ ಪಡೆಯಲು ವೈದ್ಯಕೀಯ ದಾಖಲೆಗಳನ್ನು ಸೃಷ್ಠಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ಶಸ್ತ್ರಚಿಕಿತ್ಸೆ ಆಗಿಲ್ಲ ಎಂದರೆ ಸರಿ. ವೈದ್ಯಕೀಯ ಬಿಲ್ಲುಗಳನ್ನು ಈ ಪ್ರಕರಣಕ್ಕಾಗಿ ಸೃಷ್ಠಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ.

ನಾನು ಟೈಲರ್ ಕೆಲಸ ಮಾಡುತ್ತಿದ್ದೆ. ಅದಕ್ಕೆ ದಾಖಲೆ ಹಾಜರುಪಡಿಸಿಲ್ಲ. ನನಗೆ ಆಗಿದ್ದ ಗಾಯ ವಾಸಿಯಾಗಿದೆ ಎಂದರೆ ಸರಿಯಲ್ಲ. ಆ ಬಗ್ಗೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಹೇಳಿರುವ ವಿಷಯಗಳು ಸುಳ್ಳು ಎಂದರೆ ಸರಿಯಲ್ಲ.

ನನಗೆ ಅಪಘಾತದ ವೇಳೆಗೆ 45 ಕ್ಕಿಂತ ಹೆಚ್ಚಿನ ವಯಸ್ಸಾಗಿತ್ತು ಎಂದರೆ, 40 ವರ್ಷ ವಯಸ್ಸಾಗಿತ್ತು.

**ಮರು ವಿಚಾರಣೆ ಇಲ್ಲ.**

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಎಂ.ಎ.ಸಿ.ಟಿ., ತಿ.ನರಸೀಪುರ.**